# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 483 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:27-05-2019

## ಸುತ್ತೋಲೆ

ವಿಷಯ: ಕೆ.ಐ.ಎ.ಡಿ.ಬಿ.ಯ ಎಲ್ಲಾ ಕೈಗಾರಿಕಾ ಪ್ರದೇಶಗಳಲ್ಲಿನ ಆಸ್ತಿ ತೆರಿಗೆಯನ್ನು ಆನ್ ಲೈನ್ ಸೇವೆ ಮುಖಾಂತರ ಕೆ.ಐ.ಎ.ಡಿ.ಬಿ.ಯು ವಸೂಲು ಮಾಡಿ, ತಕ್ಷಣವೇ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಪಾವತಿ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 481 ಗ್ರಾಪಂಅ 2016, ದಿನಾಂಕ:27-02-2018.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 11-01-2019 ರಂದು ನಡೆದ 10ನೇ ಡಯಲಾಗ್ ಅಂಡ್ ಮಾನಿಟರಿಂಗ್ ಕಮಿಟಿ ಸಭೆಯ ನಡವಳಿಗಳು.

*******

ಉಲ್ಲೇಖ(1) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳು ಕೈಗಾರಿಕೆಗಳಿಗೆ ವಿಧಿಸುತ್ತಿರುವ ತೆರಿಗೆ ಹಾಗೂ ಫೀಜುಗಳು ಮತ್ತು ವಸೂಲಿ ಕ್ರಮದ ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಸದರಿ ಮಾರ್ಗಸೂಚಿಗಳಲ್ಲಿ ಕೆ.ಐ.ಎ.ಡಿ.ಬಿ. /ಕೆ.ಎಸ್.ಎಸ್.ಐ.ಡಿ.ಸಿ. ಹಾಗೂ ಇನ್ನಿತರೆ ಕೈಗಾರಿಕೋದ್ಯಮ ಸಂಘಗಳು ತೆರಿಗೆ ವಸೂಲಾತಿ ಮಾಡಿ ಪಾವತಿಸಲು ಮುಂದೆ ಬಂದಲ್ಲಿ ಅವಕಾಶ ಕಲ್ಪಿಸಲಾಗಿದೆ.

ಉಲ್ಲೇಖ(2) ರ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:11-01-2019 ರಂದು ನಡೆದ 10ನೇ ಡಯಲಾಗ್ ಅಂಡ್ ಮಾನಿಟರಿಂಗ್ ಕಮಿಟಿ ಸಭೆಯಲ್ಲಿ ಕೆ.ಐ.ಎ.ಡಿ.ಬಿ. ಕೈಗಾರಿಕಾ ಪ್ರದೇಶಗಳಲ್ಲಿನ ಸ್ವತ್ತುಗಳ ಆಸ್ತಿ ತೆರಿಗೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಹೊರಡಿಸಿರುವ ಉಲ್ಲೇಖ(1) ರ ಸುತ್ತೋಲೆಯ ಅನುಸಾರ ವಸೂಲು ಮಾಡಲು ಮತ್ತು ಇದನ್ನು ಉಲ್ಲಂಘಿಸಿದ ಪಿಡಿಓ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಜರುಗಿಸಲು ಹಾಗೂ ಕೆ.ಐ.ಎ.ಡಿ.ಬಿ.ಯ ಎಲ್ಲಾ ಕೈಗಾರಿಕಾ ಪ್ರದೇಶಗಳಲ್ಲಿನ ಆಸ್ತಿ ತೆರಿಗೆಯನ್ನು ಆನ್ ಲೈನ್ ಸೇವೆ ಮುಖಾಂತರ ಕೆ.ಐ.ಎ.ಡಿ.ಬಿ.ಯು ವಸೂಲು ಮಾಡಿ, ತದನಂತರ, ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಪಾವತಿ ಮಾಡಲು ತೀರ್ಮಾನಿಸಲಾಗಿರುತ್ತದೆ.

ಆಸ್ತಿ ತೆರಿಗೆ ಪಾವತಿಗೆ ಸಂಬಂಧಿಸಿದಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಕೈಗಾರಿಕಾ ಪ್ರದೇಶಗಳಲ್ಲಿನ ಸ್ವತ್ತುಗಳ ಆಸ್ತಿ ತೆರಿಗೆಯನ್ನು ಲೆಕ್ಕಾಚಾರ ಮಾಡಿ, ಘಟಕಗಳ ಪಟ್ಟಿಯೊಂದಿಗೆ ವಿವರಗಳನ್ನು ಸಂಬಂಧಪಟ್ಟ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕೆ.ಐ.ಎ.ಡಿ.ಬಿ. ಇವರಿಗೆ ಸಲ್ಲಿಸಿದ್ದಲ್ಲಿ, ಅದರಂತೆ ಆಸ್ತಿ ತೆರಿಗೆಯನ್ನು ಕೆ.ಐ.ಎ.ಡಿ.ಬಿ.ಯು ವಸೂಲು ಮಾಡಿ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಪಾವತಿ ಮಾಡುತ್ತದೆ

ಆದ್ದರಿಂದ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಡಯಲಾಗ್ ಅಂಡ್ ಮಾನಿಟರಿಂಗ್ ಕಮಿಟಿ ಸಭೆಯ ತೀರ್ಮಾನದಂತೆ, ಆಸ್ತಿ ತೆರಿಗೆ ಪಾವತಿಗೆ ಸಂಬಂಧಿಸಿದಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಕೈಗಾರಿಕಾ ಪ್ರದೇಶಗಳಲ್ಲಿನ ಸ್ವತ್ತುಗಳ ಆಸ್ತಿ ತೆರಿಗೆಯನ್ನು ಲೆಕ್ಕಾಚಾರ ಮಾಡಿ, ಘಟಕಗಳ ಪಟ್ಟಿಯೊಂದಿಗೆ ವಿವರಗಳನ್ನು ಸಂಬಂಧಪಟ್ಟ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕೆ.ಐ.ಎ.ಡಿ.ಬಿ. ಇವರಿಗೆ ಸಲ್ಲಿಸುವಂತೆ, ಆಸ್ತಿ ತೆರಿಗೆಯನ್ನು ಕೆ.ಐ.ಎ.ಡಿ.ಬಿ.ಯು ವಸೂಲು ಮಾಡಲು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನೇರವಾಗಿ ಕೈಗಾರಿಕಾ ಪ್ರದೇಶಗಳಲ್ಲಿರುವ ಕೈಗಾರಿಕೆಗಳಿಗೆ ಆಸ್ತಿ ತೆರಿಗೆ ವಸೂಲು ಮಾಡದಂತೆ ಸೂಚಿಸಿದೆ.

ಕೆ.ಐ.ಎ.ಡಿ.ಬಿ.ಯ ಎಲ್ಲಾ ಕೈಗಾರಿಕಾ ಪ್ರದೇಶಗಳಲ್ಲಿನ ಆಸ್ತಿ ತೆರಿಗೆಯನ್ನು ಆನ್ ಲೈನ್ ಸೇವೆ ಮುಖಾಂತರ ಕೆ.ಐ.ಎ.ಡಿ.ಬಿ.ಯು ವಸೂಲು ಮಾಡಿ, ತಕ್ಷಣವೇ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಪಾವತಿ ಮಾಡಲು ಕ್ರಮ ಕೈಗೊಳ್ಳುವಂತೆ ತಿಳಿಸಿದೆ.

27/5/19

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್-I) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ. ವಿಕಾಸ ಸೌಧ, ಬೆಂಗಳೂರು.
3) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
4) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
6) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.